ಕರ್ನಾಟಕ ಸರ್ಕಾರ
ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ,-590001
OFFICE OF THE DEPUTY COMMISSIONER, BELAGAVI DISTRICT, BELAGAVI -590001

ದೂರವಾಣಿ : 0831-2407200, 2407273
Email: deo.belagavi@gmail.com
Telephone:

ಸಂ:ಸಿಎಪಿಲ್/ವಿವ-21/2025-26

ದಿನಾಂಕ:18.08.2025

ವಿಷಯ:ಬೆಳಗಾವಿ ಜಿಲ್ಲೆಯಲ್ಲಿ ಕೆಲವೊಂದು ತಾಲ್ಲೂಕುಗಳಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಸದರಿ ತಾಲೂಕುಗಳ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳು, ಪದವಿ ಪೂರ್ವ ಕಾಲೇಜುಗಳು ಮತ್ತು ಅಂಗನವಾಡಿಗಳಿಗೆ ರಜೆ ಘೋಷಿಸುವ ಕುರಿತು.

ಉಲ್ಲೇಖ:
1. ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ), ಇವರ ಪತ್ರ ಸಂ: ಆಶಾ/ ತೀ ಮಳೆ/ಪ್ರಾ, ಪ್ರೌ/ರಜೆ/2025-26 ದಿನಾಂಕ: 18.08.2025.
2. ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಚಿಕ್ಕೋಡಿ ಇವರ ಪತ್ರ ದಿನಾಂಕ:18.08.2025
3. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಇವರ ಪತ್ರ ದಿನಾಂಕ:18.08.2025.
4. Karnataka State Forecast Issued by IMD at 1300 Hours IST of 18.08.2025.
5. ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್) .

*****

**ಪ್ರಸ್ತಾವನೆ:**

ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ) ಮತ್ತು ಚಿಕ್ಕೋಡಿ ರವರು ಉಲ್ಲೇಖ (1&2) ರಡಿ ಬೆಳಗಾವಿ ಜಿಲ್ಲೆಯಲ್ಲಿ ವಿಪರೀತ ಮಳೆ ಸುರಿಯುತ್ತಿರುವ ಹಿನ್ನಲೆಯಲ್ಲಿ ಬೆಳಗಾವಿ (ನಗರ, ಗ್ರಾಮೀಣ) ಬೈಲಹೊಂಗಲ, ಕಿತ್ತೂರ, ಖಾನಾಪೂರ,ರಾಮದುರ್ಗ ಸವದತ್ತಿ, ಚಿಕ್ಕೋಡಿ ಹಾಗೂ ಹುಕ್ಕೇರಿ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳಿಗೆ ರಜೆ ನೀಡುವಂತೆ ವಿನಂತಿಸಿರುತ್ತಾರೆ.ಆದ್ದರಿಂದ ಮಕ್ಕಳ ಸುರಕ್ಷತಾ ದೃಷ್ಟಿಯಿಂದ ದಿನಾಂಕ; 19.08.2025 ರಂದು ರಜೆ ನೀಡುವಂತೆ ಕೋರಿರುತ್ತಾರೆ. ಅದೇ ರೀತಿಯಾಗಿ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಇವರು ಬೆಳಗಾವಿ, ಬೈಲಹೊಂಗಲ, ಕಿತ್ತೂರ, ಖಾನಾಪೂರ,ರಾಮದುರ್ಗ ಹಾಗೂ ಸವದತ್ತಿ ತಾಲೂಕುಗಳ ವಿಧ್ಯಾರ್ಥಿಗಳ ಸುರಕ್ಷತೆಯ ಹಿತದೃಷ್ಟಿಯಿಂದ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ:19.08.2025 ರಂದು ರಜೆ ನೀಡುವಂತೆ ಉಲ್ಲೇಖ (3)ರಡಿ ಕೋರಿರುತ್ತಾರೆ.

ಮುಂದುವರೆದು ಭಾರತೀಯ ಹವಾಮಾನ ಇಲಾಖೆ (IMD), ಬೆಂಗಳೂರು ರವರು ಬೆಳಗಾವಿ ಜಿಲ್ಲೆಯಲ್ಲಿ ದಿನಾಂಕ:19.08.2025 ರಂದು ಭಾರಿ ಮಳೆಯಾಗುವ ಸೂಚನೆ (ರೆಡ್ ಅಲರ್ಟ್)ನ್ನು ಉಲ್ಲೇಖ (4) ರನ್ವಯ ನೀಡಿರುತ್ತಾರೆ. ಕಾರಣ ಸದರಿ ಸೂಚನೆ ಹಾಗೂ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ) ಮತ್ತು ಚಿಕ್ಕೋಡಿ ಇವರ ವರದಿಗಳನ್ನಾಧರಿಸಿ ಹಾಗೂ ಶಾಲಾ ಮಕ್ಕಳ ಸುರಕ್ಷತೆಯ ಹಿತದೃಷ್ಟಿಯಿಂದ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34(ಎಮ್) ರಡಿ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರಿಗೆ ಪ್ರದತ್ತವಾದ ಅಧಿಕಾರದ ಮೇರೆಗೆ ಬೆಳಗಾವಿ ಜಿಲ್ಲೆಯ ಬೆಳಗಾವಿ, ಬೈಲಹೊಂಗಲ, ಕಿತ್ತೂರ, ಖಾನಾಪೂರ,ರಾಮದುರ್ಗ, ಸವದತ್ತಿ, ಚಿಕ್ಕೋಡಿ ಹಾಗೂ ಹುಕ್ಕೇರಿ ತಾಲ್ಲೂಕುಗಳಾದ್ಯಂತ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆಗಳು, ಅಂಗನವಾಡಿಗಳು ಮತ್ತು ಬೆಳಗಾವಿ ಬೈಲಹೊಂಗಲ, ಕಿತ್ತೂರ, ಖಾನಾಪೂರ,ರಾಮದುರ್ಗ ಹಾಗೂ ಸವದತ್ತಿ ತಾಲೂಕುಗಳ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ: 19-08-2025 ರಂದು ರಜೆ ಘೋಷಿಸುವ ಅವಶ್ಯಕತೆ ಇರುವುದರಿಂದ ಈ ಕೆಳಗಿನಂತೆ ಆದೇಶ ಮಾಡಿದೆ.

Scanned with OKEN Scanner

<u>**ಆದೇಶ**</u>

ಈ ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ಮತ್ತು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್) ರಡಿ ಪ್ರದತ್ತವಾದ ಅಧಿಕಾರದ ಮೇರಗೆ **ಬೆಳಗಾವಿ ಜಿಲ್ಲೆಯ ಬೆಳಗಾವಿ, ಬೈಲಹೊಂಗಲ, ಕಿತ್ತೂರ, ಖಾನಾಪೂರ, ರಾಮದುರ್ಗ, ಸವದತ್ತಿ, ಚಿಕ್ಕೋಡಿ ಹಾಗೂ ಹುಕ್ಕೇರಿ ತಾಲ್ಲೂಕುಗಳಾದ್ಯಂತ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆ, ಅಂಗನವಾಡಿಗಳು ಮತ್ತು "ಬೆಳಗಾವಿ ಬೈಲಹೊಂಗಲ, ಕಿತ್ತೂರ, ಖಾನಾಪೂರ,ರಾಮದುರ್ಗ ಹಾಗೂ ಸವದತ್ತಿ" ತಾಲೂಕುಗಳ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ: 19-08-2025 ರಂದು ರಜೆ ಘೋಷಿಸಿ ಆದೇಶಿಸಿದೆ.**

ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ ಮತ್ತು ಚಿಕ್ಕೋಡಿ, ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಹಾಗೂ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಬೆಳಗಾವಿ ರವರು ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಈ ರಜಾ ಅವಧಿಯನ್ನು ಮುಂದಿನ ದಿನಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದು.

**ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ಬೆಳಗಾವಿ ಜಿಲ್ಲೆ, ಬೆಳಗಾವಿ**

**ಪ್ರತಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:**

1. ಪೋಲಿಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ.
2. ಪೋಲಿಸ್ ಅಧೀಕ್ಷಕರು, ಬೆಳಗಾವಿ
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ, ಬೆಳಗಾವಿ
4. ಉಪವಿಭಾಗಾಧಿಕಾರಿಗಳು, ಬೆಳಗಾವಿ, ಬೈಲಹೊಂಗಲ, ಚಿಕ್ಕೋಡಿ.
5. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ, ಚಿಕ್ಕೋಡಿ.
6. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ
7. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಳಗಾವಿ
8. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೆಳಗಾವಿ ರವರಿಗೆ ಸರ್ಕಾರಕ್ಕೆ ವೆಚ್ಚ ಬಾರದ ರೀತಿಯಲ್ಲಿ ಸ್ಥಳೀಯ ಸುದ್ದಿ ಮಾದ್ಯಮಗಳಲ್ಲಿ ಪ್ರಕಟಿಸುವ ಕುರಿತು.
9. ತಹಶೀಲ್ದಾರ ಬೆಳಗಾವಿ ಬೈಲಹೊಂಗಲ, ಕಿತ್ತೂರ, ಖಾನಾಪೂರ,ರಾಮದುರ್ಗ, ಸವದತ್ತಿ, ಚಿಕ್ಕೋಡಿ ಹಾಗೂ ಹುಕ್ಕೇರಿ.

**ಅಪರ ಜಿಲ್ಲಾಧಿಕಾರಿ,**
**ಬೆಳಗಾವಿ ಜಿಲ್ಲೆ, ಬೆಳಗಾವಿ**

Scanned with OKEN Scanner